ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು - 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ:ಶೈವಿ:2018-19: 13

ದಿನಾಂಕ: 13.04.2018

## ಸುತ್ತೋಲೆ

ವಿಷಯ: **2017-18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಕೋಟಾದಡಿಯಲ್ಲಿ ಹಂಚಿಕೆಯಾಗಿ ಖಾಲಿ ಉಳಿದ/ ಉಳಿಯುವ ಬಿ.ಇಡಿ ಸೀಟುಗಳನ್ನು ಆಡಳಿತ ಮಂಡಳಿಯ ಕೋಟಾದಡಿಯಲ್ಲಿ ಭರ್ತಿ ಮಾಡಿಕೊಳ್ಳುವ ಕುರಿತು.**

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ: ಇಡಿ 101 ಯುಆರ್‌ಸಿ 2018 ದಿನಾಂಕ: 11.04.2018
2) ಸರ್ಕಾರದ ಆದೇಶ ಸಂಖ್ಯೆ: ಇಡಿ 21 ಯುಟಿಐ 2018 ದಿನಾಂಕ: 12.04.2018
3) ಮಾನ್ಯ ಕುಲಪತಿಯವರ ಅನುಮೋದನೆ (ಕಂಡಿಕೆ- 59) ದಿನಾಂಕ 13.04.2018

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಸರ್ಕಾರದ ಪತ್ರ ಹಾಗೂ ಉಲ್ಲೇಖ (2)ರ ಸರ್ಕಾರದ ಆದೇಶದನ್ವಯ **2017-18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಕೋಟಾದಡಿಯಲ್ಲಿ ಹಂಚಿಕೆಯಾಗಿ ಖಾಲಿ ಉಳಿದ/ಉಳಿಯುವ ಬಿ.ಇಡಿ ಸೀಟುಗಳನ್ನು ಆಡಳಿತ ಮಂಡಳಿಯ ಕೋಟಾದಡಿಯಲ್ಲಿ ಭರ್ತಿ ಮಾಡಿಕೊಳ್ಳಲು ದಂಡಶುಲ್ಕವಿಲ್ಲದೆ ಕೊನೆಯ ದಿನಾಂಕವನ್ನು 20.04.2018ಕ್ಕೆ ನಿಗದಿಪಡಿಸಿ** ವಿಸ್ತರಿಸಲಾಗಿದೆ.

ಪ್ರವೇಶ ಪಡೆದ ವಿದ್ಯಾರ್ಥಿಗಳ ಪಟ್ಟಿ ಹಾಗೂ ವಿಶ್ವವಿದ್ಯಾನಿಲಯಕ್ಕೆ ಪಾವತಿಸಿರುವ ಪ್ರವೇಶ ಶುಲ್ಕದ ಚಲನ್ ಪ್ರತಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು **ಕೊನೆಯ ದಿನಾಂಕ 26.04.2018.**

ಮೇಲ್ಕಂಡ ಉಲ್ಲೇಖ (1)ರ ಸರ್ಕಾರದ ಪತ್ರ ಹಾಗೂ ಉಲ್ಲೇಖ (2)ರ ಸರ್ಕಾರದ ಆದೇಶವನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲ www.tumkuruniversity.ac.in ನಲ್ಲಿ ಪ್ರಕಟಿಸಲಾಗಿದೆ. ಸದರಿ ಪತ್ರ ಮತ್ತು ಆದೇಶವನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲದಿಂದ ಪಡೆದು ಆದೇಶದಲ್ಲಿನ ಷರತ್ತುಗಳನ್ನು ಪ್ರವೇಶಾತಿಯಲ್ಲಿ ಕಟ್ಟುನಿಟ್ಟಾಗಿ ಪಾಲಿಸಿ ವಿಶ್ವವಿದ್ಯಾನಿಲಯಕ್ಕೆ ವರದಿ ಸಲ್ಲಿಸುವುದು.

BSe 13/04/18
ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿರುವ ಸಂಯೋಜಿತ ಬಿ.ಇಡಿ ಶಿಕ್ಷಣ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ

**ಪ್ರತಿಗಳು**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಕುಲಸಚಿವರು, ಮೌಲ್ಯಮಾಪನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
5. ಕಚೇರಿ ಪ್ರತಿ

(118)

ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 101 ಯುಆರ್‌ಸಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:11-04-2018

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು – 560 001.

ಇವರಿಗೆ

1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570005.
2. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾನಿಲಯ, ಧಾರವಾಡ-580033.
3. ಕುಲಸಚಿವರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ-577451.
4. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾನಿಲಯ, ಕಲಬುರಗಿ-585106.
5. ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು-574199.
6. ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-572101.
7. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ.
8. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾನಿಲಯ, ಬೆಳಗಾವಿ.
9. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ.
10. ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ-586101.
11. ಕುಲಸಚಿವರು ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕ ದೇವರಾಜು ಅರಸು ಬಡಾವಣೆ, ಕೋಲಾರ.
12. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು-560056.
13. ಕುಲಸಚಿವರು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.

ಮಾನ್ಯರೆ,

ವಿಷಯ:- 2017-18ನೇ ಸಾಲಿನ ಬಿ.ಎಡ್ ವ್ಯಾಸಂಗಕ್ಕೆ ವಿಶ್ವವಿದ್ಯಾಲಯಗಳು ನಿಗದಿಪಡಿಸಿದ ಅಂತಿಮ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 292 ಯುಎನ್‌ಇ 2016, ದಿನಾಂಕ:02.09.2016.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆಯನ್ವಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಬಿ.ಎಡ್ ಮತ್ತು ಎಂ.ಎಡ್ ಕೋರ್ಸುಗಳಿಗೆ ಏಕರೂಪ ವೇಳಾ ಪಟ್ಟಿಯನ್ನು ಅಳವಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಚೌಸನ್ ಶಿಕ್ಷಣ ಮಹಾವಿದ್ಯಾಲಯ, ಚಿಕ್ಕೋಡಿ, ಇವರು ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯ, ಧಾರವಾಡ ಪೀಠ, ಧಾರವಾಡ, ಇಲ್ಲಿ ರಿಟ್ ಅರ್ಜಿ ಸಂಖ್ಯೆ: 111913/2017ನ್ನು ದಾಖಲಿಸಿದ್ದರಿಂದ ಸರ್ಕಾರಿ ಕೋಟಾದಡಿ ಹಂಚಿಕೆಯಾಗಿ ಖಾಲಿ ಉಳಿದ ಸೀಟುಗಳನ್ನು ಭರ್ತಿ ಮಾಡಲು ಸರ್ಕಾರದಿಂದ ನೀಡಬೇಕಾಗಿದ್ದ ಆದೇಶವು ವಿಳಂಬವಾಗಿರುತ್ತದೆ.

2..

DR (Acd)
11/4/18

ಪ್ರಸ್ತುತ ರಿಟ್ ಅರ್ಜಿ ಸಂಖ್ಯೆ:111913/2017ಕ್ಕೆ ಸಂಬಂಧಿಸಿದಂತೆ ದಿನಾಂಕ:05.03.2018ರಂದು ವಿಚಾರಣೆ ನಡೆಸಿದ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:14.02.2018ರಂದು ಹೊರಡಿದ್ದ ಆದೇಶವನ್ನು ಹಿಂಪಡೆದಿರುತ್ತದೆ(Recalled).

ಈ ಹಿನ್ನೆಲೆಯಲ್ಲಿ ಬಿ.ಎಡ್. ಕಾಲೇಜುಗಳ ವಿದ್ಯಾರ್ಥಿಗಳ ದಾಖಲಾತಿಗಳಿಗೆ ಅಂತಿಮ ದಿನಾಂಕವನ್ನು ನಿಗದಿ ಪಡಿಸಿದಂತಹ ವಿಶ್ವವಿದ್ಯಾಲಯಗಳು ಮಾತ್ರ ಈ ಪತ್ರ ಹೊರಡಿಸಿದ ದಿನಾಂಕದಿಂದ ವಿದ್ಯಾರ್ಥಿಗಳ ದಾಖಲಾತಿಗೆ ಅಂತಿಮ ದಿನಾಂಕವನ್ನು ದಂಡ ರಹಿತವಾಗಿ ಒಂದು ವಾರದವರೆಗೆ ವಿಸ್ತರಣೆ ಮಾಡುವಂತೆ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸೂಚಿಸಲಾಗಿದೆ.

ತಮ್ಮ ನಂಬುಗೆಯ,

11/04/18

(ಎಂ.ಎ. ಅಹಮದ್ ಜಾನ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2).

11/4/2018

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017-18ನೇ ಸಾಲಿನಲ್ಲಿ ಸರ್ಕಾರದ ಕೋಟಾದಡಿ ಹಂಚಿಕೆಯಾಗಿ ಖಾಲಿ ಉಳಿದ/ಉಳಿಯುವ ಬಿ.ಇಡಿ ಸಿಟುಗಳನ್ನು ಆಡಳಿತ ಮಂಡಳಿಯ ಕೋಟಾದಡಿ ಭರ್ತಿ ಮಾಡಿಕೊಳ್ಳಲು ಉನ್ನತ ಶಿಕ್ಷಣ ಇಲಾಖೆ ಅಧೀನದ ವಿಶ್ವವಿದ್ಯಾಲಯಗಳ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗಳಲ್ಲಿನ ಶಿಕ್ಷಣ ಮಹಾವಿದ್ಯಾಲಯಗಳಿಗೆ ಅನುಮತಿ ನೀಡುವ ಬಗ್ಗೆ

ಓದಲಾಗಿದೆ:

1) Karnataka Selection of Candidates for admission to Teachers Certificate Higher Course (TCH) and Bachelor of Education Course (B.Ed) rules, 1999.
2) Karnataka Selection of Candidates for admission to Teachers Certificate Higher Course (TCH) and Bachelor of Education Course (B.Ed) Amendment rules, 2000.
3) ಸರ್ಕಾರದ ಆದೇಶ ಸಂಖ್ಯೆ:ಇಡಿ 64 ಯುಬಿವಿ 2016, ದಿನಾಂಕ:03.05.2016
4) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಇಡಿ 70 ಯುಬಿವಿ 2016, ದಿನಾಂಕ:27.05.2016
5) ಸರ್ಕಾರದ ಆದೇಶ ಸಂಖ್ಯೆ:ಇಡಿ 77 ಯುಬಿವಿ 2017, ದಿನಾಂಕ:07.04.2017

### ಪ್ರಸ್ತಾವನೆ:

ಶಿಕ್ಷಣ ಬೋಧನಾ ವ್ಯಾಸಂಗ ಕ್ರಮಗಳಾದ ಟಿ.ಸಿ.ಹೆಚ್. ಹಾಗೂ ಬಿ.ಇಡಿ ಕೋರ್ಸುಗಳ ದಾಖಲಾತಿ ಪ್ರಕ್ರಿಯೆಯನ್ನು ವಿನಿಯಮಗೊಳಿಸಲು ಮೇಲೆ ಓದಲಾದ ಕ್ರಸಂ.1 ರ ಹಾಗೂ 2ರ ನಿಯಮಗಳಲ್ಲಿ ಉಪಬಂಧಗಳನ್ನು ಗೊತ್ತುಪಡಿಸಲಾಗಿದೆ. ಸರ್ಕಾರಿ ಕೋಟಾದಡಿ ಹಂಚಿಕೆಯಾಗಿ ಖಾಲಿ ಉಳಿಯುವ ಬಿ.ಇಡಿ. ಸೀಟುಗಳನ್ನು ಆಡಳಿತ ಮಂಡಳಿಯಿಂದ ತುಂಬುವ ಕುರಿತು Karnataka Selection of Candidates for admission to Teachers Certificate Higher Course (TCH) and Bachelor of Education Course (B.Ed) Amendment rules, 2000 ರ ನಿಯಮ 7ರ ಉಪನಿಯಮ 8ರಲ್ಲಿ ಈ ಕೆಳಕಂಡಂತೆ ಉಪಬಂಧಿಸಲಾಗಿದೆ.

> "(8) For the seats remaining vacant even after re-allotment and counseling, further counseling shall be done by selecting the candidates from out of the waiting list by reducing the cut off percentage under the category in which vacancies exist. This process shall be continued till all the vacant seats are filled up in all the categories under Government Seats, until the list of eligible candidates is exhausted. Seats still remaining vacant shall be filled up by management only if the Government issues specific orders in this regard."

ಪೂರ್ವೋಕ್ತ ನಿಯಮದಲ್ಲಿ ಉಪಬಂಧಿಸಲಾಗಿರುವಂತೆ ಸರ್ಕಾರಿ ಕೋಟಾದಡಿಯ ಎಲ್ಲಾ ಪ್ರವರ್ಗಗಳಲ್ಲಿನ ಖಾಲಿ ಸೀಟುಗಳನ್ನು ಭರ್ತಿ ಮಾಡುವವರೆಗೆ ಮರುಹಂಚಿಕೆ ಹಾಗೂ ಮರುಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಮುಂದುವರೆಸಬೇಕಾಗುತ್ತದೆ. ತದನಂತರದಲ್ಲಿಯೂ ಖಾಲಿ ಉಳಿಯುವ ಸೀಟುಗಳನ್ನು ಸರ್ಕಾರವು ನಿರ್ದಿಷ್ಟ ಆದೇಶ ಹೊರಡಿಸುವ ಮೂಲಕ ಅನುಮತಿಸಿದಲ್ಲಿ ಮಾತ್ರ ಆಡಳಿತ ಮಂಡಳಿಯಿಂದ ಭರ್ತಿ ಮಾಡಿಕೊಳ್ಳಬಹುದಾಗಿರುತ್ತದೆ.

2016ನೇ ಸಾಲಿನವರೆಗೆ ಅನುಸರಿಸಿಕೊಂಡು ಬರಲಾದಂತೆ, ಸರ್ಕಾರದ ಕೋಟಾದಡಿ ಖಾಲಿ ಉಳಿಯುವ ಸೀಟುಗಳನ್ನು ಆಡಳಿತ ಮಂಡಳಿಯಿಂದ ಭರ್ತಿ ಮಾಡಲು ಆಯಾ ವಿಶ್ವವಿದ್ಯಾಲಯದಡಿಯ ಕಾಲೇಜುಗಳಿಗೆ ಪ್ರತ್ಯೇಕವಾಗಿ ಅನುಮತಿ ನೀಡುವ ವ್ಯವಸ್ಥೆಯಿಂದಾಗಿ ಪ್ರವೇಶ ದಾಖಲಾತಿ ಪ್ರಕ್ರಿಯೆಯಲ್ಲಿ ತೊಂದರೆಗಳು

ಎದುರಾಗುತ್ತಿರುವುದನ್ನು ಹಾಗೂ ವಿಳಂಬ ಉಂಟಾಗುತ್ತಿರುವುದನ್ನು ಗಮನಿಸಿದ ಹಾಗೂ ಗಂಭೀರವಾಗಿ ಪರಿಗಣಿಸಿದ ಸರ್ಕಾರವು ಈ ಪ್ರಕ್ರಿಯೆಯನ್ನು ಸರಳೀಕರಿಸುವ ಮೂಲಕ ಎಲ್ಲಾ ಅಡಚಣೆಗಳನ್ನು ನಿವಾರಿಸಿ ಪ್ರವೇಶ ದಾಖಲಾತಿಗಳನ್ನು ಕಾಲಬದ್ಧವಾಗಿ ಹಾಗೂ ಪರಿಣಾಮಕಾರಿ ರೀತಿಯಲ್ಲಿ ಪೂರ್ಣಗೊಳಿಸುವ ಅಗತ್ಯತೆಯನ್ನು ಮನಗಂಡು, 2016ನೇ ಸಾಲಿನಿಂದ ಸರ್ಕಾರದ ಅನುಮತಿಯನ್ನು ರಾಜ್ಯದ ವಿಶ್ವವಿದ್ಯಾಲಯಗಳ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಡುವ ಎಲ್ಲಾ ಶಿಕ್ಷಣ ಮಹಾವಿದ್ಯಾಲಯಗಳಿಗೆ ಏಕಕಾಲದಲ್ಲಿ ಸಾಮಾನ್ಯವಾಗಿ ಅನ್ವಯಿಸುವಂತೆ ಸೂತ್ರೀಕರಿಸುವಂತಹ ಸಮಗ್ರ ಕಾರ್ಯನೀತಿಯನ್ನು ರೂಪಿಸಲಾಗಿದೆ.

ಅದರಂತೆ 2015-16ನೇ ಸಾಲಿನಲ್ಲಿ ಸರ್ಕಾರದ ಕೋಟಾದಡಿ ಖಾಲಿ ಉಳಿಯುವ ಬಿ.ಇಡಿ ಸೀಟುಗಳನ್ನು ಆಡಳಿತ ಮಂಡಳಿಯಿಂದ ಭರ್ತಿ ಮಾಡಲು Karnataka Selection of Candidates for admission to Teachers Certificate Higher Course (TCH) and Bachelor of Education Course (B.Ed) Amendment rules, 2000 ರ ನಿಯಮ 7 ಉಪನಿಯಮ 8ರನ್ವಯ ಅವಶ್ಯಕವಾದ ಸರ್ಕಾರದ ಅನುಮತಿಯನ್ನು ರಾಜ್ಯದ ವಿಶ್ವವಿದ್ಯಾಲಯಗಳ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಡುವ ಎಲ್ಲಾ ಶಿಕ್ಷಣ ಮಹಾವಿದ್ಯಾಲಯಗಳಿಗೆ ಏಕಕಾಲದಲ್ಲಿ ಸಾಮಾನ್ಯವಾಗಿ ಅನ್ವಯಿಸುವಂತೆ ಮೇಲೆ ಕ್ರಮಸಂಖ್ಯೆ(3) ಮತ್ತು (4)ರಲ್ಲಿ ಓದಲಾದ ಆದೇಶಗಳಲ್ಲಿ ನೀಡಲಾಗಿದೆ. ಮುಂದುವರೆದು ಇದೇ ಕಾರ್ಯನೀತಿಯನ್ನು ಮೇಲೆ ಕ್ರಮಸಂಖ್ಯೆ(5)ರಲ್ಲಿ ಓದಲಾದ ಆದೇಶದನ್ವಯ 2017-18ನೇ ಸಾಲಿನಲ್ಲಿಯೂ ಅನುಸರಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರದ ಕೋಟಾದಡಿ ಖಾಲಿ ಉಳಿಯುವ ಸೀಟುಗಳನ್ನು ಆಡಳಿತ ಮಂಡಳಿಯಿಂದ ಭರ್ತಿ ಮಾಡುವ ಪ್ರಕ್ರಿಯೆಯನ್ನು ಸರಳೀಕರಿಸಲು 2016ನೇ ಸಾಲಿನಲ್ಲಿ ರೂಪಿಸಲಾಗಿರುವ ಸಮಗ್ರ ವ್ಯವಸ್ಥೆಯನ್ನು ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ವಿಶ್ವವಿದ್ಯಾಲಯಗಳ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಟ್ಟು ಕೇಂದ್ರೀಯ ದಾಖಲಾತಿ ಘಟಕದಲ್ಲಿ ನೋಂದಣಿಯಾಗಿರುವ ಎಲ್ಲಾ ಬಿ.ಎಡ್. ಕಾಲೇಜುಗಳಿಗೆ 2017-18ನೇ ಸಾಲಿನಲ್ಲಿ ಅನ್ವಯಿಸುವುದು ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಸೂಕ್ತ ಹಾಗೂ ಅವಶ್ಯಕವೆಂದು ತೀರ್ಮಾನಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ:ಇಡಿ 21 ಯುಟಿಟಿ 2018, ಬೆಂಗಳೂರು, ದಿನಾಂಕ:12.04.2018</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಸನ್ನಿವೇಶಗಳ ಹಿನ್ನೆಲೆಯಲ್ಲಿ ರಾಷ್ಟ್ರೀಯ ಬೋಧಕ ಶಿಕ್ಷಣ ಮಂಡಳಿಯ(N.C.T.E) ಮಾನ್ಯತೆ ಹೊಂದಿರುವ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ವಿಶ್ವವಿದ್ಯಾಲಯಗಳ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಡುವ/ಸಂಯೋಜನೆ ಹೊಂದಿರುವ ಎಲ್ಲಾ ಶಿಕ್ಷಣ ಮಹಾವಿದ್ಯಾಲಯಗಳಲ್ಲಿ 2017-18ನೇ ಸಾಲಿಗೆ ಹಂಚಿಕೆಯಾಗದೇ ಸರ್ಕಾರಿ ಕೋಟಾದಡಿ ಖಾಲಿ ಉಳಿದಿರುವ ಹಾಗೂ ಹಂಚಿಕೆಯಾದ ಸೀಟುಗಳ ಪೈಕಿ ವಿದ್ಯಾರ್ಥಿಗಳು ದಾಖಲಾಗದೇ ಮರುಹಂಚಿಕೆ ಅಥವಾ ಮರುಕೌನ್ಸಿಲಿಂಗ್ ನಂತರವು ಖಾಲಿ ಉಳಿಯುವ ಸೀಟುಗಳು ಸೇರಿದಂತೆ ಸರ್ಕಾರಿ ಕೋಟಾದಡಿಯಲ್ಲಿ ಒಟ್ಟಾರೆಯಾಗಿ ಖಾಲಿ ಉಳಿಯುವ ಬಿ.ಇಡಿ ಸೀಟುಗಳನ್ನು ಸಂದರ್ಭಾನುಸಾರ ವಿಶ್ವವಿದ್ಯಾಲಯಗಳು ನಿಗದಿಪಡಿಸಿದ ಅಂತಿಮ ಕಾಲಾವಧಿ ಅಥವಾ ಸರ್ಕಾರದ ಪತ್ರ ಸಂಖ್ಯೆ:ಇಡಿ 101 ಯುಆರ್‌ಸಿ 2018, ದಿನಾಂಕ:11.04.2018ರಲ್ಲಿ ಸದರಿ ಪತ್ರ ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ವಿಸ್ತರಿಸಲಾಗಿರುವ ಒಂದು ವಾರದ ಅಂದರೆ 7 ಕಾರ್ಯನಿರತ ದಿನಗಳ ಕಾಲಮಿತಿಯೊಳಗಾಗಿ ಆಯಾ ಕಾಲೇಜುಗಳ ಆಡಳಿತ ಮಂಡಳಿಯಿಂದ ಭರ್ತಿ ಮಾಡಲು Karnataka Selection of Candidates for admission to Teachers Certificate Higher Course (TCH) and Bachelor of Education Course (B.Ed) Amendment rules, 2000 ರ ನಿಯಮ 7 ಉಪನಿಯಮ 8ರನ್ವಯ ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

ಸರ್ಕಾರದ ಕೋಟಾದಡಿ ಖಾಲಿ ಉಳಿದಿರುವ ಬಿ.ಇಡಿ. ಸೀಟುಗಳನ್ನು ಉನ್ನತ ಶಿಕ್ಷಣ ಇಲಾಖೆ ಅಧೀನದ ಎಲ್ಲಾ ವಿಶ್ವವಿದ್ಯಾಲಯಗಳ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಡುವ/ಸಂಯೋಜನೆ ಹೊಂದಿರುವ ಕಾಲೇಜುಗಳ ಆಡಳಿತ ಮಂಡಳಿಗಳಿಂದ ಭರ್ತಿ ಮಾಡಲು ಒಂದು ವೇಳೆ ಈ ಆದೇಶಕ್ಕೂ ಪೂರ್ವದಲ್ಲಿ ಕಾಲೇಜುವಾರು ಪ್ರತ್ಯೇಕವಾಗಿ ಸರ್ಕಾರದ ಅನುಮತಿಯನ್ನು ನೀಡಲಾಗಿದ್ದಲ್ಲಿ, ಅಂತಹ ಪ್ರಕರಣಗಳು ಈ ಆದೇಶದ ಪರಿವ್ಯಾಪ್ತಿಗೆ ಒಳಪಡುವುದಾಗಿ ಭಾವಿಸತಕ್ಕದ್ದು.

ಈ ಆದೇಶವನ್ನು ಮಾನ್ಯ ಉಚ್ಚ ನ್ಯಾಯಾಲಯದ ಧಾರವಾಡ ಪೀಠದಲ್ಲಿ ದಾಖಲಿಸಲಾಗಿರುವ ರಿಟ್ ಅರ್ಜಿಸಂಖ್ಯೆ:111913/2017ರಲ್ಲಿ ನೀಡಲಾಗುವ ಅಂತಿಮ ತೀರ್ಮ ಅಗತ್ಯಪಡಿಸಿದಲ್ಲಿ ಮರು ಪರಿಶೀಲನೆ ಅಥವಾ ಪರಿಷ್ಕರಣೆಗೊಳಡಿಸುವ ಷರತ್ತಿಗೊಳಪಟ್ಟು ಹೊರಡಿಸಲಾಗಿದೆ.

ಸರ್ಕಾರದ ಕೋಟಾದಡಿ ಖಾಲಿ ಉಳಿದಿರುವ ಬಿ.ಇಡಿ. ಸೀಟುಗಳನ್ನು ಕಾಲೇಜುಗಳ ಆಡಳಿತ ಮಂಡಳಿಗಳಿಂದ ಭರ್ತಿ ಮಾಡಲು ನೀಡಲಾಗಿರುವ ಪೂರ್ವೋಕ್ತ ಅನುಮತಿಯು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟಿರುತ್ತದೆ.

i. *ಸರ್ಕಾರಿ ಕೋಟಾದಡಿ ಹಂಚಿಕೆಯಾಗದೇ ಖಾಲಿ ಉಳಿದಿರುವ ಸೀಟುಗಳು ಹಾಗೂ ಹಂಚಿಕೆಯಾದ ಸೀಟುಗಳ ಪೈಕಿ ವಿದ್ಯಾರ್ಥಿಗಳು ದಾಖಲಾಗದೇ ಮರುಹಂಚಿಕೆ ಅಥವಾ ಮರುಕೌನ್ಸಿಲಿಂಗ್ ನಂತರವು ಖಾಲಿ ಉಳಿದಿರುವ ಸೀಟುಗಳ ಸಂಖ್ಯೆಗಳ ನೈಜತೆ ಹಾಗೂ ನಿಖರತೆ ಕೇಂದ್ರೀಕೃತ ದಾಖಲಾತಿ ಘಟಕದ ಅಂಕಿ-ಅಂಶಗಳನ್ನು ಆಧರಿಸಿರತಕ್ಕದ್ದು. ಅಂದರೆ ಈ ಸಂಬಂಧವಲ್ಲಿ ಕೇಂದ್ರೀಕೃತ ದಾಖಲಾತಿ ಘಟಕದ ಅಂಕಿ-ಅಂಶಗಳೇ ಅಂತಿಮ.*

ii. *ನೈಜ ಖಾಲಿ ಸೀಟುಗಳನ್ನು ಮೀರಿ ಭರ್ತಿ ಮಾಡಿಕೊಳ್ಳಲಾಗುವ ದಾಖಲಾತಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.*

iii. *ಸರ್ಕಾರಿ ಕೋಟಾದಡಿ ಸರ್ಕಾರದ ಕೋಟಾದಡಿ ಖಾಲಿ ಉಳಿದಿರುವ ಸೀಟುಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಮೇಲೆ ವಿಶ್ವವಿದ್ಯಾಲಯಗಳು ನಿಗಾ ಇಡತಕ್ಕದ್ದು.*

iv. *ಸರ್ಕಾರಿ ಕೋಟಾದಡಿಯ ಸೀಟುಗಳನ್ನು ಭರ್ತಿಮಾಡಿಕೊಂಡಿರುವುದರಲ್ಲಿ ಲೋಪ/ವ್ಯತಿಕ್ರಮಗಳು ಕಂಡುಬಂದಲ್ಲಿ ವಿಶ್ವವಿದ್ಯಾಲಯಗಳು ಸಂಬಂಧಿಸಿದ ಕಾಲೇಜುಗಳ ವಿರುದ್ಧ ಕಠಿಣ ಕ್ರಮಜರುಗಿಸತಕ್ಕದ್ದು.*

v. *ಸರ್ಕಾರವು ವಿಧಿಸಿರುವ ಶುಲ್ಕವನ್ನು ಹಾಗೂ ವಿಶ್ವವಿದ್ಯಾಲಯಗಳು ನಿಗಧಿಪಡಿಸಿರುವ ಇತರೇ ಶುಲ್ಕಗಳನ್ನು ಮಾತ್ರ ತೆಗೆದುಕೊಳ್ಳತಕ್ಕದ್ದು.*

vi. *ಸರ್ಕಾರದ ಕೋಟಾದಡಿ ಖಾಲಿ ಉಳಿದಿರುವ ಸೀಟುಗಳನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮಾತ್ರ ಮೀಸಲಿಡತಕ್ಕದ್ದು.*

vii. *ಸರ್ಕಾರಿ ಕೋಟಾದಡಿಯ ಖಾಲಿ ಸೀಟುಗಳ ಪ್ರವೇಶ ದಾಖಲಾತಿ ಪ್ರಕ್ರಿಯೆಯನ್ನು,* ಸಂದರ್ಭಾನುಸಾರ ವಿಶ್ವವಿದ್ಯಾಲಯಗಳು ನಿಗದಿಪಡಿಸಿದ ಅಂತಿಮ ಕಾಲಾವಧಿ ಹಾಗೂ ಸರ್ಕಾರದ ಪತ್ರ ಸಂಖ್ಯೆ:ಇಡಿ 101 ಯುಆರ್‌ಸಿ 2018, ದಿನಾಂಕ:11.04.2018ರಲ್ಲಿ ವಿಸ್ತರಿಸಲಾಗಿರುವ ಕಾಲಮಿತಿಯೊಳಗಾಗಿ ನಿಗದಿಪಡಿಸುವ ಕಾಲಮಿತಿಯೊಳಗಾಗಿ *ಅಂತಿಮಗೊಳಿಸತಕ್ಕದ್ದು.*

viii. *ಈಗಾಗಲೇ ತರಗತಿಗಳು ಪ್ರಾರಂಭವಾಗಿದ್ದಲ್ಲಿ ವಿಳಂಬವಾಗಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ಏರ್ಪಡಿಸುವ ಮೂಲಕ ಪಠ್ಯಕ್ರಮವನ್ನು ಪೂರ್ಣಗೊಳಿಸತಕ್ಕದ್ದು.*

ix. ಸರ್ಕಾರಿ ಕೋಟಾದಡಿ ಖಾಲಿ ಉಳಿದ ಬಿ.ಇಡಿ ಸೀಟುಗಳನ್ನು ಆಡಳಿತ ಮಂಡಳಿಯಿಂದ ಭರ್ತಿ ಮಾಡಿಕೊಳ್ಳಲಾಗಿರುವ ಸಂಪೂರ್ಣ ವಿವರಗಳನ್ನು ದಿನಾಂಕ:31.05.2018ರೊಳಗೆ ಸಂಬಂಧಿಸಿದ ವಿಶ್ವವಿದ್ಯಾಲಯಗಳಿಗೆ ವರದಿ ಮಾಡತಕ್ಕದ್ದು. ತಪ್ಪಿದಲ್ಲಿ ವಿದ್ಯಾರ್ಥಿಗಳ ಪ್ರವೇಶ ದಾಖಲಾತಿಗೆ ಮಾನ್ಯತೆಯನ್ನು ನೀಡತಕ್ಕದ್ದಲ್ಲ.

x. ಹೈದರಾಬಾದ್-ಕರ್ನಾಟಕದ ಮೀಸಲಾತಿ ಸೀಟುಗಳನ್ನು ನಿಯಮಾನುಸಾರ ಭರ್ತಿ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

12/04/18
(ಎಂ.ವಿ.ಅಹ್ಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

20/04/18

ಗೆ,
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ- ಸದರಿ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, 50 ಪ್ರತಿಗಳನ್ನು ಒದಗಿಸಲು ಕೋರಿದೆ.

ಇವರಿಗೆ:-

1) ಪ್ರಾದೇಶಿಕ ನಿರ್ದೇಶಕರು, ದಕ್ಷಿಣ ಪ್ರಾದೇಶಿಕ ಸಮಿತಿ (ಎನ್‌ಸಿಟಿಇ), ಜ್ಞಾನಭಾರತಿ ಕ್ಯಾಂಪಸ್ ರಸ್ತೆ, ನಾಗರಬಾವಿ, ನ್ಯಾಷನಲ್ ಲಾ ಸ್ಕೂಲ್ ಎದುರು, ಬೆಂಗಳೂರು-560072.
2) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ಕುಲಪತಿಗಳು/ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
4) ಕುಲಪತಿಗಳು/ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
5) ಕುಲಪತಿಗಳು/ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
6) ಕುಲಪತಿಗಳು/ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗ-585 106.
7) ಕುಲಪತಿಗಳು/ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
8) ಕುಲಪತಿಗಳು/ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಬಿ.ಆರ್. ಪ್ರಾಜೆಕ್ಟ್-577 451.
9) ಕುಲಪತಿಗಳು/ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101.
10) ಕುಲಪತಿಗಳು/ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ-586 101.
11) ಕುಲಪತಿಗಳು/ಕುಲಸಚಿವರು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ
12) ಕುಲಪತಿಗಳು/ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾಂ.
13) ಕುಲಪತಿಗಳು/ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
14) ಕುಲಪತಿಗಳು/ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು
15) ಕುಲಪತಿಗಳು/ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ದೇವರಾಜ್ ಅರಸು ಬಡಾವಣೆ, ಟಮಕ, ಕೋಲಾರ.
16) ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು
17) ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬನಶಂಕರಿ 3ನೇ ಹಂತ, ಬೆಂಗಳೂರು-85
18) ವಿಶೇಷಾಧಿಕಾರಿ, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು.

ಪ್ರತಿ:-ಮಾಹಿತಿಗಾಗಿ

1) ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).
4) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ